ಸಿ. ಸಿ. ನಂ.- **389/2023**

ಪಿ. ಡಬ್ಲ್ಯೂ- **1**

ಸಾಕ್ಷಿಯು ದಿನಾಂಕ- **09-08-2024** ರಂದು ವಿಚಾರಣೆಗಾಗಿ ಹಾಜರಾಗಿದ್ದು ಅವರಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ- ದೂರುದಾರರ ಪರ ವಕೀಲರಿಂದ -

ನಾನು ನನ್ನ ಮುಖ್ಯ ವಿಚಾರಣೆಗಾಗಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು ಸದರಿ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ನಾನೇ ನೀಡಿ ಬರೆಯಿಸಿದ್ದು ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲ ವಿಷಯಗಳು ನನಗೆ ಗೊತ್ತು ಮತ್ತು ಅದರಲ್ಲಿರುವ ಸಹಿಗಳು ನನ್ನದಾಗಿವೆ.

ಆರೋಪಿಯು ನೀಡಿರುವ ಚೆಕ್ಕನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.- **1** ಎಂದು, ನಿ.ಪಿ.-**1** ರಲ್ಲಿರುವ ಆರೋಪಿಯ ಸಹಿಯನ್ನು ನಿ.ಪಿ.- **1**-ಎ ಎಂದು, ಬ್ಯಾಂಕಿನ ಚಲನ್ ನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.- **2** ಎಂದು, ಬ್ಯಾಂಕಿನ ಹಿಂಬರಹವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.- **3** ಎಂದು, ಆರೋಪಿಗೆ ನೀಡಿರುವ ಲೀಗಲ್ ನೋಟಿಸ್ಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.- **4** ಎಂದು, ಅಂಚೆ ರಸೀದಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.- **5** ಎಂದು, ಮುಚ್ಚಿದ್ದ ಅಂಚೆ ಲಕೋಟೆಯನ್ನು ನಿಪಿ **6** ಎಂದು ಗುರುತಿಸಿ ಸದರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆಯಲಾಯಿತು. ಅದರಲ್ಲಿರುವ ನೋಟಿಸನ್ನು ನಿಪಿ **6** ಎ ಎಂದು, ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.- **7** ಮತ್ತು **8** ಎಂದು ಗುರುತಿಸಲಾಯಿತು. ಆದ್ದರಿಂದ ಆರೋಪಿ ವಿರುದ್ಧ ಸೂಕ್ತ ಕಾನೂನು ಕ್ರಮವನ್ನು ತೆಗೆದುಕೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ.

(ಆರೋಪಿ ಪರ ವಕೀಲರು ಪಾಟೀಸವಾಲಿಗಾಗಿ ಸಮಯಾವಕಾಶವನ್ನು ಕೇಳಿದ್ದು ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.)

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಲಯ
ಮತ್ತು ಪ್ರ. ದ. ನ್ಯಾ. ದಂ.ಗಳು, ಹೊಸಪೇಟೆ.